552 ಶ್ರೀ ಸುಭಾಷ ಆರ್. ಗುತ್ತೇದಾರ್ (ಆಳಂದ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆ ಆಳಂದ ತಾಲ್ಲೂಕಿನ ಆಳಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಹಳೇ ಕಟ್ಟಡದ ನಿವೇಶನವೆಷ್ಟು; ಎಕರೆವಾರು ಮಾಹಿತಿ ನೀಡುವುದು;

ಆ) ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಸ್ವತ್ತನ್ನು ಖಾಸಗಿಯವರು ಒತ್ತುವರಿ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಗುಲ್ಬರ್ಗಾ ಜಿಲ್ಲೆಯ ಆಳಂದ ತಾಲ್ಲೂಕಿನ ಆಳಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಹಳೇ ಕಟ್ಟಡದ ನಿವೇಶನದ ಒಟ್ಟು ಅಳತೆಯು 38.50 ಗುಂಟೆಗಳು ಆಗಿದೆ.

ಆ) ಬಂದಿದೆ.

ಆರೋಗ್ಯ ಇಲಾಖೆಯ ಅನುಮತಿ ಪಡೆಯದೇ ಆಳಂದ ತಾಲ್ಲೂಕಿನ ಶಿಕ್ಷಣ ಇಲಾಖೆಯವರು ಒತ್ತುವರಿ ಮಾಡಿಕೊಂಡಿರುವುದು ಗಮನಕ್ಕೆ ಬಂದಿದ್ದು, ಈ ಕುರಿತು ಶಿಕ್ಷಣ ಇಲಾಖೆಯ ಜೊತೆ ಪತ್ರ ವ್ಯವಹಾರ ಮಾಡಲಾಗಿದೆ.

512 ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳಲ್ಲಿರುವ ಸಾರ್ವಜನಿಕ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರಗಳನ್ನು ನೀಡುವುದು);

ಆ) ಹಾಗಿದ್ದಲ್ಲಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳ 30 ಹಾಸಿಗೆಗಳ ಆರೋಗ್ಯ ಕೇಂದ್ರಗಳನ್ನು 100 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಲು ದಿನಾಂಕ: 25/1/2007 ರಂದು ಸರ್ಕಾರದ ಆದೇಶವಾಗಿರುತ್ತದೆ. ಆದರೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

NBCD ಹಾಗೂ KBDC ಯಿಂದ ಮಂಜೂರಾದ ಹಣ

536 ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ (ಅಫ್ಜಲ್‌ಪುರ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) NBCD ಹಾಗೂ KBDC ಯಿಂದ ಸರಕಾರಕ್ಕೆ ಮಂಜೂರಾದ ಹಣವೆಷ್ಟು;

ಆ) ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ;

ಇ) ಹಾಗಿದ್ದಲ್ಲಿ, ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ರಾಷ್ಟ್ರೀಯ ಹಿಂದುಳಿದ ವರ್ಗಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮದಿಂದ (NBCFDC) ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ (DBCDC) ರೂ. 20.00 ಕೋಟಿಗಳನ್ನು ಮಂಜೂರು ಮಾಡಿದೆ.